ಕನ್ನಡಪ್ರಭ

**ಕಾರ್ಯಪ್ರವೃತ್ತರಾಗಿ...** ಸೈಬರ್ ಸುರಕ್ಷತಾ ಜಾಗೃತಿ ಕಾರ್ಯಾಗಾರದಲ್ಲಿ ಎಸ್‌ಪಿ ನಾರಾಯಣ ಎಂ.

# ಅತಿಯಾದ ಸಾಮಾಜಿಕ ಜಾಲತಾಣ ಬಳಕೆ ಸರಿಯಲ್ಲ

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಎಂಜಿನಿಯರಿಂಗ್ ತರಬೇತಿ ಪಡೆಯುತ್ತಿರುವ ಯುವ ಎಂಜಿನಿಯರರು ಹ್ಯಾಕರ್ಸ್‌ಗಳು ಮಾಹಿತಿಗಳನ್ನು ದುರುಪಯೋಗ ಪಡಿಸಿಕೊಳ್ಳ ದಂಥ ಸಾಫ್ಟ್‌ವೇರ್‌ಗಳನ್ನು ಸಂಶೋಧಿಸುವ ದಿಸೆಯಲ್ಲಿ ಕಾರ್ಯಪ್ರವೃತ್ತರಾಗಬೇಕು. ಆ ಮೂಲಕ ಸೈಬರ್‌ಅಪರಾಧಗಳನ್ನು ತಡೆಯುವಲ್ಲಿ ಯುವ ವಿದ್ಯಾರ್ಥಿ ಸಮೂಹವು ಪೊಲೀಸ್ ಇಲಾಖೆಯೊಂದಿಗೆ ಕೈಜೋಡಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಎಂ. ತಿಳಿಸಿದರು.

ಬುಧವಾರ ಪಟ್ಟಣದಲ್ಲಿ ಕೆಎಲ್‌ಎಸ್ ಸಂಸ್ಥೆಯ ವಿಡಿಐಟಿ ಎಂಜಿನಿಯರಿಂಗ್ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಸೈಬರ್‌ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರದಲ್ಲಿ ಮಾತನಾಡಿದರು.

ಯುವಪೀಳಿಗೆಯು ಸಾಮಾಜಿಕ ಜಾಲತಾಣದಲ್ಲಿ ಅತಿಯಾಗಿ ತೊಡಗಿಸಿಕೊಳ್ಳುವುದರಿಂದ ಸೈಬರ್‌ಅಪರಾಧಗಳ ಸಂಖ್ಯೆ ಗಣನೀಯವಾಗಿ ವೃದ್ಧಿಸುತ್ತಿದ್ದು, ಯುವ ಸಮೂಹ ಆದಷ್ಟು ತಮ್ಮ ಖಾಸಗಿ ಮಾಹಿತಿಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳಬಾರದು. ತಮ್ಮ ವೈಯಕ್ತಿಕವಾದ ಹಾಗೂತೀರಾಖಾಸಗಿಯಾದಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಾರೆಂದು ಆತಂಕ ವ್ಯಕ್ತಪಡಿಸಿದರು.

ಅದಕ್ಕಾಗಿ ಯುವಜನರು ಅಗತ್ಯಕ್ಕಿಂತ ಹೆಚ್ಚು ಸಾಮಾಜಿಕ ಜಾಲತಾಣದಲ್ಲಿ ತೊಡಗಿಸಿಕೊಳ್ಳಬಾರದೆಂದರು. ಆನ್‌ಲೈನ್ ಗೇಮ್ಸ್ ಹಾಗೂ ನಗದು ವ್ಯವಹಾರ ಮಾಡುವ ಮುನ್ನ ತಂತ್ರಾಂಶದ ಸತ್ಯಾಸತ್ಯತೆಯನ್ನು ತಿಳಿದುಕೊಳ್ಳುವುದು ಉತ್ತಮ ಎಂದರು.

ಕಾರ್ಯಕ್ರಮದಅಧ್ಯಕ್ಷತೆಯನ್ನುವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಮಾತನಾಡಿ, ಉತ್ತಮ ಸಮಾಜ ನಿರ್ಮಾಣದಲ್ಲಿ ಯುವ ಎಂಜಿನಿಯರ್‌ಗಳ ಪಾತ್ರವು ಬಹುಮುಖ್ಯವಾಗಿದೆ. ಸಮಾಜಕ್ಕೆ ಪೂರಕವಾದ, ಸಮಾಜವನ್ನು ಬಲಿಷ್ಠಗೊಳಿಸುವ ದಿಸೆಯಲ್ಲಿ ನಮ್ಮ ಯುವ ಎಂಜಿನಿಯರ್‌ಗಳು ಮುಂದಾಗಬೇಕೆಂದರು.

ದಾಂಡೇಲಿಯ ಡಿವೈಎಸ್ಪಿ ಶಿವನಾಂದ ಮದರಖಂಡಿ ಹಾಗೂ ಹಳಿಯಾಳ ಪಿಎಸ್‌ಐ ವಿನೋದ ರೆಡ್ಡಿ ಮಾತನಾಡಿ, ಮಾದಕ ವಸ್ತುಗಳಿಗೆ ಸಂಬಂಧಿಸಿದ ಎನ್‌ಡಿಪಿಎಸ್ ಕಾಯ್ದೆಯಬಗ್ಗೆಸಮಗ್ರವಾದಮಾಹಿತಿಯನ್ನು ನೀಡಿ, ಅನೈತಿಕ ಹಾಗೂ ಸಮಾಜಘಾತುಕ ಕಾರ್ಯಗಳಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬಾರದೆಂದರು.

ಸಿಪಿಐ ಜಯಪಾಲ್ ಪಾಟೀಲ ಹಾಗೂ ಅಪರಾಧ ವಿಭಾಗದ ಪಿಎಸ್‌ಐ ಅಮೀನ್ ಅತ್ತಾರ, ಕಾಲೇಜಿನ್ ಡೀನ್ ಪ್ರೊ. ಸುಧೀರ್ ಕುಲಕರ್ಣಿ, ಡಾ. ಎಂ.ಎಸ್. ಸನ್ನಾಯ್ಕರ್, ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಸಮೀರ ಗಲಗಲಿ, ಅವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ. ಮಹೇಂದ್ರ ದೀಕ್ಷಿತ್, ಎನ್‌ಎಸ್‌ಎಸ್ ಸಂಚಾಲಕ ಪ್ರೊ. ಸಂತೋಷ ಸವಣೂರ ಇದ್ದರು.



ಕೆಎಲ್‌ಎಸ್ ಸಂಸ್ಥೆಯ ವಿಡಿಐಟಿ ಎಂಜಿನಿಯರಿಂಗ್ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಸೈಬರ್‌ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರ ಜರುಗಿತು.

> **ತಮ್ಮ ವೈಯಕ್ತಿಕವಾದ ಹಾಗೂ ತೀರಾ ಖಾಸಗಿಯಾದ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಾರೆ.**
>
> • **ನಾರಾಯಣ ಎಂ.**
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ



ಹಳಿಯಾಳದಲ್ಲಿ ಆಯೋಜಿಸಿದ್ದ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಎಸ್‌ಪಿ ನಾರಾಯಣ ಎಂ. ಅವರನ್ನು ಸನ್ಮಾನಿಸಲಾಯಿತು. ಶಿವಾನಂದ ಮದರಖಂಡಿ, ಡಾ. ವಿ.ಎ. ಕುಲಕರ್ಣಿ ಇತರರಿದ್ದರು.

# ಜಾಲತಾಣದಲ್ಲಿ ಖಾಸಗಿ ಮಾಹಿತಿ ಹಂಚಿಕೊಳ್ಳುವ ಮುನ್ನ ಎಚ್ಚರ

**ಹಳಿಯಾಳ:** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿ ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕು ಎಂದು ಎಸ್‌ಪಿ ನಾರಾಯಣ ಎಂ. ಕಿವಿಮಾತು ಹೇಳಿದರು.

ಪಟ್ಟಣದ ಕೆಎಲ್‌ಎಸ್‌ವಿಡಿಐಟಿ ಮಹಾವಿದ್ಯಾಲಯದಲ್ಲಿ ಬುಧವಾರ ಆಯೋಜಿಸಿದ್ದ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇಂದಿನ ಯುವ ಪೀಳಿಗೆ ಸಾಮಾಜಿಕ ಜಾಲತಾಣದಲ್ಲಿ ಅತಿಯಾಗಿ ತೊಡಗಿಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗುತ್ತಿವೆ. ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆ ಎಂದು ವಿವರಿಸಿದರು.

ದಾಂಡೇಲಿ ಡಿವೈಎಸ್ಪಿ ಶಿವಾನಂದ ಮದರಖಂಡಿ ಮತ್ತು ಪಿಎಸ್‌ಐ ವಿನೋದ ರೆಡ್ಡಿ, ಮಾದಕ ವಸ್ತುಗಳಿಗೆ ಸಂಬಂಧಿಸಿದ ಎನ್‌ಡಿಪಿಎಸ್ ಕಾಯ್ದೆ ಬಗ್ಗೆ ವಿವರಿಸಿದರು. ಸಿಪಿಐ ಜಯಪಾಲ ಪಾಟೀಲ, ಪಿಎಸ್‌ಐ ಅಮ್ಮಿನ್ ಅತ್ತಾರ್, ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ, ಡೀನ್ ಸುಧೀರ ಕುಲಕರ್ಣಿ , ಡಾ. ಎಂ.ಎಸ್. ಸನ್ನಾಯ್ಕರ, ಡಾ. ಸಮೀರ ಗಲಗಲಿ, ಡಾ. ಮಹೇಂದ್ರ ದೀಕ್ಷಿತ್, ಪ್ರೊ. ಸಂತೋಷ ಸವಣೂರು ಇತರರಿದ್ದರು.

# ಸಾಮಾಜಿಕ ಜಾಲತಾಣದ ಅತಿ ಬಳಕೆ ಸಲ್ಲ



**ಪಟ್ಟಣದಲ್ಲಿ ಕೆ.ಎಲ್.ಎಸ್ ಸಂಸ್ಥೆಯ ವಿ.ಡಿ.ಐ.ಟಿ ಇಂಜಿನಿಯರಿಂಗ್ ಮಹಾವಿದ್ಯಾಲಯದಲ್ಲಿ ಆಯೋಜಿಸಿದ ಸೈಬರ್ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಎಂ ಮಾತನಾಡಿದರು.**

**ಹಳಿಯಾಳ:** ಯುವಪೀಳಿಗೆಯು ಸಾಮಾಜಿಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿಕೊಳ್ಳುವುದರಿಂದ ಸೈಬರ್ ಅಪರಾಧಗಳ ಸಂಖ್ಯೆಯು ಗಣನೀಯವಾಗಿ ವೃದ್ಧಿಸುತ್ತಿದ್ದು, ವಿದ್ಯಾರ್ಥಿಗಳು ಆದಷ್ಟು ತಮ್ಮ ಖಾಸಗಿ ಮಾಹಿತಿಗಳನ್ನು, ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳಬಾರದೆಂದು ಉತ್ತರ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಎಂ. ಹೇಳಿದರು.

ಬುಧವಾರ ಪಟ್ಟಣದಲ್ಲಿ ಕೆ.ಎಲ್.ಎಸ್ ಸಂಸ್ಥೆಯ ವಿ.ಡಿ.ಐ.ಟಿ ಇಂಜಿನಿಯರಿಂಗ್ ಮಹಾವಿದ್ಯಾಲಯದಲ್ಲಿ ಆಯೋಜಿಸಿದ ಸೈಬರ್ ಸುರಕ್ಷತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರದಲ್ಲಿ ಮಾತನಾಡಿದರು.

ತಮ್ಮ ವೈಯುಕ್ತಿಕವಾದ ಹಾಗೂ ತೀರಾ ಖಾಸಗಿಯಾದ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆಂದು ಆತಂಕ ವ್ಯಕ್ತಪಡಿಸಿದರು.

ಅದಕ್ಕಾಗಿ ಯುವಜನರು ಅಗತ್ಯಕ್ಕಿಂತ ಹೆಚ್ಚು ಸಾಮಾಜಿಕ ಜಾಲತಾಣದಲ್ಲಿ ತೊಡಗಿಸಿಕೊಳ್ಳಬಾರದು. ಆನ್ಲೈನ್ ಗೇಮ್ಸ್ ಹಾಗೂ ನಗದು ವ್ಯವಹಾರ ಮಾಡುವ ಮುನ್ನ ತಂತ್ರಾಂಶದ ಸತ್ಯಾಸತ್ಯತೆ ತಿಳಿದುಕೊಳ್ಳುವುದು ಉತ್ತಮ. ಇನ್ನೂ ಇಂಜಿನಿಯರಿಂಗ್ ತರಬೇತಿಯನ್ನು ಪಡೆಯುತ್ತಿರುವ ಯುವ ಇಂಜಿನಿಯರರು ಹ್ಯಾಕರ್ಸ್‌ಗಳು ಮಾಹಿತಿಗಳನ್ನು ದುರುಪಯೋಗ ಪಡಿಸಿಕೊಳ್ಳದಂತಹ ಸಾಫ್ಟ್‌ವೇರಗಳನ್ನು ಸಂಶೋಧಿಸುವ ದಿಸೆಯಲ್ಲಿ ಕಾರ್ಯಪ್ರವೃತ್ತರಾಗಬೇಕು, ತನ್ಮೂಲಕ ಸೈಬರ್ ಅಪರಾಧಗಳನ್ನುತಡೆಯುವಲ್ಲಿಯುವವಿದ್ಯಾರ್ಥಿ ಸಮೂಹವು ಪೊಲೀಸ್ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದರು. ಅಧ್ಯಕ್ಷತೆ ವಹಿಸಿದ ಕಾಲೇಜಿನ ಪ್ರಾಚಾರ್ಯ ಡಾ. ವಿ.ಎ.ಕುಲಕರ್ಣಿ ಮಾತನಾಡಿ, ಉತ್ತಮ ಸಮಾಜ ನಿರ್ಮಾಣದಲ್ಲಿ ಯುವ ಇಂಜಿನಿಯರ್‌ಗಳ ಪಾತ್ರವು ಬಹುಮುಖ್ಯವಾಗಿದೆ, ಸಮಾಜಕ್ಕೆ ಪೂರಕವಾದ, ಸಮಾಜವನ್ನು ಬಲಿಷ್ಠಗೊಳಿಸುವ ದಿಸೆಯಲ್ಲಿ ನಮ್ಮ ಯುವ ಇಂಜಿನಿಯರ್‌ಗಳು ಮುಂದಾಗಬೇಕೆಂದರು.

ದಾಂಡೇಲಿಯ ಡಿವೈಎಸ್ಪಿ ಶಿವನಾಂದ ಮದರಖಂಡಿ ಹಾಗೂ ಹಳಿಯಾಳ ಪಿಎಸ್ಐ ವಿನೋದ ರೆಡ್ಡಿ ಮಾತನಾಡಿದರು. ಹಳಿಯಾಳ ಸಿ.ಪಿ.ಐ ಜಯಪಾಲ್ ಪಾಟೀಲ ಹಾಗೂ ಅಪರಾಧ ವಿಭಾಗದ ಪಿಎಸ್ಐ ಅಮೀನ್ ಅತ್ತಾರ, ಕಾಲೇಜಿನ ಡೀನ್ ಪ್ರೊ.ಸುಧೀರ್ ಕುಲಕರ್ಣಿ, ಡಾ.ಎಂ.ಎಸ್. ಸನ್ನಾಯ್ಕರ್, ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ.ಸಮೀರ ಗಲಗಲಿ, ಅವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ. ಮಹೇಂದ್ರ ದೀಕ್ಷಿತ್, ಎನ್.ಎಸ್.ಎಸ್ ಸಂಚಾಲಕ ಪ್ರೊ.ಸಂತೋಷ ಸವಣೂರ ಇದ್ದರು.




# ಸೈಬರ್ ಅಪರಾಧ ತಡೆಯುವಲ್ಲಿ ವಿದ್ಯಾರ್ಥಿಗಳು ಕಾರ್ಯಪ್ರವಾರ್ತರಾಗಬೇಕು

ಸಾಗರ ಸಾಮ್ರಾಟ ಸಮಾಚಾರ

**ಹಳಿಯಾಳ** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕೆಂದು ಉತ್ತರ ಕನ್ನಡ ಎಸ್ ಪಿ ನಾರಾಯಣ ಎಂ ಹೇಳಿದರು.

ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಸೆ/ 25ರಂದು ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸೈಬರ್ ಅಪರಾಧಗಳು ಅಧಿಕವಾಗುತ್ತಿದೆ ಎಂದು ಹೇಳಿದರು. ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆಂದು ತಿಳಿಸಿದರು. ಅಗತ್ಯತೆ ಕ್ಕಿಂತ ಅಧಿಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಗೌರವ ಅತಿಥಿಗಳಾಗಿ ಆಗಮಿಸಿದ್ದ ದಾಂಡೇಲಿ ಉಪ ಪೊಲೀಸ್ ಅಧಿಕ್ಷಕ ಶಿವಾನಂದ್ ಮದರಖಂಡಿ, ಹಳಿಯಾಳ ಠಾಣೆಯ ಪಿ ಎಸ್ ಐ ವಿನೋದ್ ರೆಡ್ಡಿ ಮಾದಕ ವಸ್ತುಗಳಿಗೆ ಸಂಬಂಧಿ}ಸಿದ ಎನ್ ಡಿ ಪಿ ಎಸ್ ಕಾಯ್ದೆ ಬಗ್ಗೆ ವಿವರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಹಳಿಯಾಳ ಸಿ ಪಿ ಐ ಜಯಪಾಲ್ ಪಾಟೀಲ್ ಹಳಿಯಾಳ ಠಾಣೆಯ ಅಪರಾಧ ವಿಭಾಗದ ಪಿ ಎಸ್ ಐ ಅಮ್ಮಿನ ಅತ್ತಾರ್ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಉತ್ತಮ ಸಮಾಜ ನಿರ್ಮಾಣದಲ್ಲಿ ನಾಗರೀಕ ಅಭಿಯಂತರ ಪಾತ್ರ ಮಹತ್ವವಾಗಿದ್ದು ಯುವ ಇಂಜಿನಿಯರ್‌ಗಳು ತಮ್ಮ ಜವಾಬ್ದಾರಿಯನ್ನು ಅರಿತು ಸಮಾಜ ಸೇವೆಗೆ ಮುಂದಾಗಬೇಕೆಂದು ಹೇಳಿದರು. ಡೀನ್ ಪ್ರೊ. ಸುಧೀರ್ ಕುಲಕರ್ಣಿ ಸ್ವಾಗತಿಸಿದರು. ಡಾ ಎಂ ಎಸ್ ಸನ್ನಾಯ್ಕರ್ ಅತಿಥಿ ಪರಿಚಯ ಮಾಡಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಸಮೀರ್ ಗಲಗಲಿ ವಂದಿಸಿದರು. ಆವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ. ಮಹೇಂದ್ರ ದೀಕ್ಷಿತ್, ಎನ್ ಎಸ್ ಎಸ್ ಸಂಚಾಲಕ ಪ್ರೊ. ಸಂತೋಷ ಸವಣೂರು ಕಾರ್ಯಕ್ರಮ ಸಂಯೋಜಿಸಿದ್ದರು.

# ಸೈಬರ್ ಅಪರಾಧ ತಡೆಯುವಲ್ಲಿ ವಿದ್ಯಾರ್ಥಿಗಳು ಕಾರ್ಯಪ್ರವೃತ್ತರಾಗಲಿ: ಎಸ್‌ಪಿ ನಾರಾಯಣ



**ಶಿರಸಿ ಸಮಾಚಾರ ⏭ ಹಳಿಯಾಳ:** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣ ದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕೆಂದು ಉತ್ತರ ಕನ್ನಡ ಎಸ್‌ಪಿ ನಾರಾಯಣ ಎಂ. ಹೇಳಿದರು. ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಬುಧವಾರ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಉತ್ತರ ಕನ್ನಡ ಜಿಲ್ಲೆಯ ಪೊಲೀಸ್ ಅಧೀಕ್ಷಕ ನಾರಾಯಣ ಎಂ. ಆಗಮಿಸಿದ್ದರು. ಇಂದಿನ ಯುವ ಪೀಳಿಗೆ ಸಾಮಾಜಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗು ತ್ತಿದೆ ಎಂದು ಹೇಳಿದರು. ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣ ಗಳಲ್ಲಿ ಹಂಚಿಕೊಳ್ಳುವು ದರಿಂದ ಹ್ಯಾಕರ್ಸ್‌ಗಳ ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆಂದು ತಿಳಿಸಿದರು. ಅಗತ್ಯತೆಗಿಂತ ಅಧಿಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೊಡಗಿಸಿಕೊಳ್ಳ ದಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಆನ್ಲೈನ್ ಗೇಮ್ಸ್ ಹಾಗೂ ನಗದು ವ್ಯವಹಾರ ಮಾಡುವ ಮುನ್ನ ತಂತ್ರಾಂಶದ ಸತ್ಯಾಸತ್ಯತೆಯನ್ನು ತಿಳಿದುಕೊಳ್ಳುವುದು ಉತ್ತಮ ಎಂದು ಹೇಳಿದರು. ಯುವ ಅಭಿಯಂತರರು ಹ್ಯಾಕರ್ಸ್‌ಗಳು ಮಾಹಿತಿಗಳನ್ನು ದುರುಪಯೋಗಪಡಿಸಿಕೊಳ್ಳದ ಂತಹ ಸಾಫ್ಟ್‌ವೇರ್‌ಗಳನ್ನು ತಯಾರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗ ಬೇಕೆಂದು ತಿಳಿಸಿದರು.

ಗೌರವ ಅತಿಥಿಗಳಾಗಿ ಆಗಮಿಸಿದ್ದ ದಾಂಡೇಲಿ ಉಪ ಪೊಲೀಸ್ ಅಧಿಕ್ಷಕ ಶಿವಾನಂದ್ ಮದರಖಂಡಿ, ಹಳಿಯಾಳ ಠಾಣೆಯ ಪಿಎಸ್‌ಐ ವಿನೋದ್ ರೆಡ್ಡಿ ಮಾದಕ ವಸ್ತುಗಳಿಗೆ ಸಂಬಂಧಿಸಿದ ಎನ್‌ಡಿಪಿಎಸ್ ಕಾಯ್ದೆ ಬಗ್ಗೆ ವಿವರವಾಗಿ ತಿಳಿಸಿದರು.

ಅನೈತಿಕ, ಸಮಾಜಘಾತುಕ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿ ಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾನೂನಿನ ಚೌಕಟ್ಟಿ ನೊಳಗೆ ಸಂವಿಧಾನವು ಒದಗಿಸಿರುವ ಸ್ವಾತಂತ್ರ್ಯವನ್ನು ಸದ್ಬಳಕೆ ಮಾಡಿಕೊಳ್ಳು ವಂತೆ ತಿಳಿಸಿ ದರು. ಈ ವೇಳೆ ಹಳಿಯಾಳ ಸಿಪಿಐ ಜಯಪಾಲ್ ಪಾಟೀಲ್ ಹಳಿಯಾಳ ಠಾಣೆಯ ಅಪರಾಧ ವಿಭಾಗದ ಪಿಎಸ್‌ಐ ಅಮ್ಮಿನ ಅತ್ತಾರ್ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ಉತ್ತಮ ಸಮಾಜ ನಿರ್ಮಾಣದಲ್ಲಿ ನಾಗರಿಕ ಅಭಿಯಂತರ ಪಾತ್ರ ಮಹತ್ವ ವಾಗಿದ್ದು ಯುವ ಇಂಜಿನಿಯರ್‌ಗಳು ತಮ್ಮ ಜವಾಬ್ದಾರಿಯನ್ನು ಅರಿತು ಸಮಾಜ ಸೇವೆಗೆ ಮುಂದಾಗಬೇಕೆಂದು ಹೇಳಿದರು. ಡೀನ್ ಪ್ರೊ.ಸುಧೀರ್ ಕುಲಕರ್ಣಿ ಸ್ವಾಗತಿಸಿದರು. ಡಾ.ಎಂ.ಎಸ್.ಸನ್ನಾಯ್ಕರ್ ಅತಿಥಿ ಪರಿಚಯ ಮಾಡಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ.ಸಮೀರ್ ಗಲಗಲಿ ವಂದಿಸಿದರು. ಆವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ.ಮಹೇಂದ್ರ ದೀಕ್ಷಿತ್, ಎನ್‌ಎಸ್‌ಎಸ್ ಸಂಚಾಲಕ ಪ್ರೊ.ಸಂತೋಷ ಸವಣೂರು ಕಾರ್ಯಕ್ರಮ ಸಂಯೋಜಿಸಿದ್ದರು. ವಿಜ್ಞಾನ ವಿಭಾಗ, ಎನ್‌ಎಸ್‌ಎಸ್ ಘಟಕ, ಆವಿಷ್ಕಾರ ಪರಿಷತ್ತು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸೈಬರ್ ಕ್ರೈಂ ತಡೆಯುವಲ್ಲಿ ವಿದ್ಯಾರ್ಥಿಗಳು ಕಾರ್ಯಪ್ರವೃತ್ತರಾಗಬೇಕು: ಎಸ್‌ಪಿ




**ಕೊಂಕಣವಾಹಿನಿ ನ್ಯೂಸ್, ಹಳಿಯಾಳ :** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕೆಂದು ಉತ್ತರ ಕನ್ನಡ ಎಸ್‌ಪಿ ನಾರಾಯಣ ಎಂ. ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಉತ್ತರ ಕನ್ನಡ ಜಿಲ್ಲೆಯ ಪೊಲೀಸ್ ಅಧೀಕ್ಷಕ ನಾರಾಯಣ ಎಂ. ಆಗಮಿಸಿ ಮಾತನಾಡಿ ಇಂದಿನ ಯುವ ಪೀಳಿಗೆ ಸಾಮಾಜಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗುತ್ತಿದೆ ಎಂದು ಹೇಳಿದರು. ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆಂದು ತಿಳಿಸಿದರು. ಅಗತ್ಯತೆ ಕ್ಕಿಂತ ಅಧಿಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

2ನೇ ಪುಟಕ್ಕೆ ▸▸

# ಸೈಬರ್ ಅಪರಾಧ ತಡೆಯುವಲ್ಲಿ ವಿದ್ಯಾರ್ಥಿಗಳು ಕಾರ್ಯಪ್ರವೃತ್ತರಾಗಬೇಕು: ಎಸ್‌ಪಿ ನಾರಾಯಣ

ನುಡಿಜೇನು ವರದಿ

**ಹಳಿಯಾಳ:** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕು. ಯುವ ಅಭಿಯಂತರರು ಹ್ಯಾಕರ್ಸ್‌ಗಳು ಮಾಹಿತಿಗಳನ್ನು ದುರುಪಯೋಗ ಪಡಿಸಿಕೊಳ್ಳದಂತಹ ಸಾಫ್ಟ್‌ವೇರ್‌ಗಳನ್ನು ತಯಾರಿಸುವ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತರಾಗಬೇಕೆಂದು ಉತ್ತರ ಕನ್ನಡ ಎಸ್‌ಪಿ ನಾರಾಯಣ ಎಂ ಹೇಳಿದರು.

ಅವರು ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಇಂದಿನ ಯುವ ಪೀಳಿಗೆ ಸಾಮಾಜಿಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿ ಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗುತ್ತಿದೆ ಎಂದು ಹೇಳಿದರು.

ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆ. ಅಗತ್ಯತೆಕ್ಕಿಂತ ಅಧಿಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಆನ್‌ಲೈನ್ ಗೇಮ್ಸ್ ಹಾಗೂ ನಗದು ವ್ಯವಹಾರ ಮಾಡುವ ಮುನ್ನ ತಂತ್ರಾಂಶದ ಸತ್ಯಾಸತ್ಯತೆಯನ್ನು ತಿಳಿದುಕೊಳ್ಳುವುದು ಉತ್ತಮ ಎಂದು ತಿಳಿಸಿದರು.

ಗೌರವ ಅತಿಥಿಗಳಾಗಿ ಆಗಮಿಸಿದ್ದ



ದಾಂಡೇಲಿ ಉಪ ಪೊಲೀಸ್ ಅಧಿಕ್ಷಕ ಶಿವಾನಂದ್ ಮದರಖಂಡಿ, ಹಳಿಯಾಳ ಠಾಣೆಯ ಪಿಎಸ್‌ಐ ವಿನೋದ್ ರೆಡ್ಡಿ ಮಾದಕ ವಸ್ತುಗಳಿಗೆ ಸಂಬಂಧಿಸಿದ ಎನ್.ಡಿ.ಪಿ.ಎಸ್ ಕಾಯ್ದೆ ಬಗ್ಗೆ ವಿವರವಾಗಿ ತಿಳಿಸಿದರು.

ಅನೈತಿಕ ಹಾಗೂ ಸಮಾಜಘಾತುಕ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾನೂನಿನ ಚೌಕಟ್ಟಿನೊಳಗೆ ಸಂವಿಧಾನವು ಒದಗಿಸಿರುವ ಸ್ವಾತಂತ್ರ್ಯವನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ.ವಿ.ಎ ಕುಲಕರ್ಣಿ ಉತ್ತಮ ಸಮಾಜ ನಿರ್ಮಾಣದಲ್ಲಿ ನಾಗರೀಕ ಅಭಿಯಂತರ ಪಾತ್ರ ಮಹತ್ವವಾಗಿದ್ದು, ಯುವ ಇಂಜಿನಿಯರ್‌ಗಳು ತಮ್ಮ ಜವಾಬ್ದಾರಿಯನ್ನು ಅರಿತು ಸಮಾಜ ಸೇವೆಗೆ ಮುಂದಾಗಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಹಳಿಯಾಳ ಸಿಪಿಐ ಜಯಪಾಲ್ ಪಾಟೀಲ್, ಹಳಿಯಾಳ ಠಾಣೆಯ ಅಪರಾಧ ವಿಭಾಗದ ಪಿಎಸ್‌ಐ ಅಮ್ಮಿನ ಅತ್ತಾರ್ ಉಪಸ್ಥಿತರಿದ್ದರು.

ಡೀನ್ ಪ್ರೊ.ಸುಧೀರ್ ಕುಲಕರ್ಣಿ ಸ್ವಾಗತಿಸಿದರು. ಡಾ.ಎಂ.ಎಸ್ ಸನ್ನಾಯ್ಕರ್ ಅತಿಥಿ ಪರಿಚಯ ಮಾಡಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ.ಸಮೀರ್ ಗಲಗಲಿ ವಂದಿಸಿದರು. ಆವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ.ಮಹೇಂದ್ರ ದೀಕ್ಷಿತ್, ಎನ್.ಎಸ್.ಎಸ್ ಸಂಚಾಲಕ ಪ್ರೊ.ಸಂತೋಷ ಸವಣೂರು ಕಾರ್ಯಕ್ರಮ ಸಂಯೋಜಿಸಿದ್ದರು.

ವಿಜ್ಞಾನ ವಿಭಾಗ, ಎನ್.ಎಸ್.ಎಸ್ ಘಟಕ ಮತ್ತು ಆವಿಷ್ಕಾರ ಪರಿಷತ್ತು ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 300ಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸೈಬರ್ ಅಪರಾಧ ತಡೆಯಲು ವಿದ್ಯಾರ್ಥಿಗಳು ಕಾರ್ಯಪ್ರವೃತ್ತರಾಗಲಿ

**ಹಳಿಯಾಳ:** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕೆಂದು ಉತ್ತರ ಕನ್ನಡ ಎಸ್‌ಪಿ ನಾರಾಯಣ ಎಂ. ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿನ ಯುವ ಪೀಳಿಗೆ ಸಾಮಾಜಿಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗುತ್ತಿದೆ ಎಂದರು.

ಗೌರವ ಅತಿಥಿಗಳಾಗಿ ಆಗಮಿಸಿದ್ದ ದಾಂಡೇಲಿ ಉಪ ಪೊಲೀಸ್ ಅಧೀಕ್ಷಕ ಶಿವಾನಂದ್ ಮದರಖಂಡಿ, ಹಳಿಯಾಳ ಠಾಣೆಯ ಪಿಎಸ್‌ಐ ವಿನೋದ್ ರೆಡ್ಡಿ ಮಾದಕ ವಸ್ತುಗಳಿಗೆ ಸಂಬಂಧಿಸಿದ ಎನ್‌ಡಿ ಪಿಎಸ್ ಕಾಯ್ದೆ ಬಗ್ಗೆ ವಿವರವಾಗಿ ತಿಳಿಸಿದರು. ಅನೈತಿಕ ಹಾಗೂ ಸಮಾಜಘಾತುಕ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾನೂನಿನ ಚೌಕಟ್ಟಿನೊಳಗೆ ಸಂವಿಧಾನವು ಒದಗಿಸಿರುವ ಸ್ವಾತಂತ್ರ್ಯವನ್ನು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು.

ಹಳಿಯಾಳ ಸಿಪಿಐ ಜಯಪಾಲ್ ಪಾಟೀಲ್, ಹಳಿಯಾಳ ಠಾಣೆಯ ಅಪರಾಧ ವಿಭಾಗದ ಪಿಎಸ್‌ಐ ಅಮೀನ ಅತ್ತಾರ್ ಉಪಸ್ಥಿತರಿದ್ದರು. ಡೀನ್ ಪ್ರೊ. ಸುಧೀರ್ ಕುಲಕರ್ಣಿ ಸ್ವಾಗತಿಸಿದರು. ಡಾ. ಎಂ.ಎಸ್. ಸನ್ನಾಯ್ಕರ್ ಅತಿಥಿ ಪರಿಚಯ ಮಾಡಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಸಮೀರ್ ಗಲಗಲಿ ವಂದಿಸಿದರು. ಆವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ. ಮಹೇಂದ್ರ ದೀಕ್ಷಿತ್, ಎನ್‌ಎಸ್‌ಎಸ್ ಸಂಚಾಲಕ ಪ್ರೊ. ಸಂತೋಷ ಸವಣೂರು ಕಾರ್ಯಕ್ರಮ ಸಂಯೋಜಿಸಿದ್ದರು. ವಿಜ್ಞಾನ ವಿಭಾಗ, ಎನ್‌ಎಸ್‌ಎಸ್ ಘಟಕ ಮತ್ತು ಆವಿಷ್ಕಾರ ಪರಿಷತ್ತು ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 300ಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



> ಉತ್ತಮ ಸಮಾಜ ನಿರ್ಮಾಣದಲ್ಲಿ ನಾಗರಿಕರ ಪಾತ್ರ ಮಹತ್ವವಾಗಿದ್ದು, ಯುವ ಎಂಜಿನಿಯರ್‌ಗಳು ತಮ್ಮ ಜವಾಬ್ದಾರಿಯನ್ನು ಅರಿತು ಸಮಾಜ ಸೇವೆಗೆ ಮುಂದಾಗಬೇಕಿದೆ.
> ■ ಡಾ. ವಿ.ಎ. ಕುಲಕರ್ಣಿ, ಪ್ರಾಚಾರ್ಯ

> ಆನ್‌ಲೈನ್ ಗೇಮ್ಸ್ ಹಾಗೂ ನಗದು ವ್ಯವಹಾರ ಮಾಡುವ ಮುನ್ನ ತಂತ್ರಾಂಶದ ಸತ್ಯಾಸತ್ಯತೆಯನ್ನು ತಿಳಿದುಕೊಳ್ಳಿ, ಹ್ಯಾಕರ್ಸ್‌ಗಳು ಮಾಹಿತಿ ದುರುಪಯೋಗಪಡಿಸಿಕೊಳ್ಳದಂತಹ ಸಾಫ್ಟ್‌ವೇರ್‌ಗಳನ್ನು ತಯಾರಿಸಲು ಯುವಕರು ಕಾರ್ಯಪ್ರವೃತ್ತರಾಗಬೇಕು.
> ■ ನಾರಾಯಣ ಎಂ., ಎಸ್‌ಪಿ

# ‘ಸಾಮಾಜಿಕ ಜಾಲತಾಣದಿಂದ ದೂರವಿರಿ’

ಪ್ರಜಾವಾಣಿ ವಾರ್ತೆ

ಹಳಿಯಾಳ: ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ನಾರಾಯಣ ಎಂ. ಹೇಳಿದರು.

ಇಲ್ಲಿನ ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ ದೇಶಪಾಂಡೆ ತಾಂತ್ರಿಕ ವಿದ್ಯಾಲಯದಲ್ಲಿ ಬುಧವಾರ ನಡೆದ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಂದಿನ ಯುವ ಪೀಳಿಗೆ ಸಾಮಾಜಿಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗುತ್ತಿದೆ. ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆ. ಅಗತ್ಯತೆಗಿಂತ ಅಧಿಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೊಡಗಿಕೊಳ್ಳಬೇಡಿ ಎಂದರು.

ದಾಂಡೇಲಿ ಉಪಪೊಲೀಸ್ ಅಧಿಕ್ಷಕ ಶಿವಾನಂದ್ ಮದರಖಂಡಿ, ಹಳಿಯಾಳ ಠಾಣೆಯ ಪಿಎಸ್‌ಐ ವಿನೋದ್ ರೆಡ್ಡಿ, ಪ್ರಾಚಾರ್ಯ ವಿ.ಎ. ಕುಲಕರ್ಣಿ, ಸಿಪಿಐ ಜಯಪಾಲ ಪಾಟೀಲ, ಪಿಎಸ್‌ಐ ಅಮ್ಮಿನ ಅತ್ತಾರ್, ಪ್ರೊ.ಸುಧೀರ್ ಕುಲಕರ್ಣಿ, ಎಂ.ಎಸ್. ಸನ್ನಾಯ್ಕರ್, ಸಮೀರ್ ಗಲಗಲಿ, ಮಹೇಂದ್ರ ದೀಕ್ಷಿತ್, ಪ್ರೊ. ಸಂತೋಷ ಸವಣೂರು ಇದ್ದರು.



ಹಳಿಯಾಳದ ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ ದೇಶಪಾಂಡೆ ತಾಂತ್ರಿಕ ವಿದ್ಯಾಲಯದಲ್ಲಿ ಸೈಬರ್ ಸುರಕ್ಷತೆ ಕುರಿತು ನಡೆದ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಎಂ. ಅವರನ್ನು ಸನ್ಮಾನಿಸಲಾಯಿತು

# ಸೈಬರ್ ಅಪರಾಧ ತಡೆಯುವಲ್ಲಿ ವಿದ್ಯಾರ್ಥಿಗಳು ಕಾರ್ಯಪ್ರವಾರ್ತರಾಗಿ




**ಹಳ್ಳಿಯ ಸಂದೇಶ ನ್ಯೂಸ್**

ಹಳಿಯಾಳ; ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕೆಂದುಉತ್ತರ ಕನ್ನಡ ಎಸ್ ಪಿ ನಾರಾಯಣ ಎಂ ಹೇಳಿದರು. ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಸಪ್ಟೆಂಬರ್ 25ರಂದು ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಉತ್ತರ ಕನ್ನಡ ಜಿಲ್ಲೆಯ ಪೊಲೀಸ್ ಅಧೀಕ್ಷಕ ನಾರಾಯಣ ಎಂ ಆಗಮಿಸಿದ್ದರು. ಇಂದಿನ ಯುವ ಪೀಳಿಗೆ ಸಾಮಾಜಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗುತ್ತಿದೆ ಎಂದು ಹೇಳಿದರು. ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್ ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆಂದು ತಿಳಿಸಿದರು. ಅಗತ್ಯತೆ ಕ್ಕಿಂತ ಅಧಿಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಆನ್ಲೈನ್ ಗೇಮ್ಸ್ ಹಾಗೂ ನಗದು ವ್ಯವಹಾರ ಮಾಡುವ ಮುನ್ನ ತಂತ್ರಾಂಶದ ಸತ್ಯಾಸತ್ಯತೆಯನ್ನು ತಿಳಿದುಕೊಳ್ಳುವುದು ಉತ್ತಮ ಎಂದು ಹೇಳಿದರು. ಯುವ ಅಭಿಯಂತರರು ಹ್ಯಾಕರ್ಸ್ ಗಳು ಮಾಹಿತಿಗಳನ್ನು ದುರುಪಯೋಗಪಡಿಸಿಕೊಳ್ಳ ದಂತಹ ಸಾಫ್ಟ್ವೇರ್ ಗಳನ್ನು ತಯಾರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ತಿಳಿಸಿದರು.

ಗೌರವ ಅತಿಥಿಗಳಾಗಿ ಆಗಮಿಸಿದ್ದ ದಾಂಡೇಲಿ ಉಪ ಪೊಲೀಸ್ ಅಧಿಕ್ಷಕ ಶ್ರೀ ಶಿವಾನಂದ್ ಮದರಖಂಡಿ, ಹಳಿಯಾಳ ಠಾಣೆಯ ಪಿ ಎಸ್ ಐ ವಿನೋದ್ ರೆಡ್ಡಿ ಮಾದಕ ವಸ್ತು ಗಳಿಗೆ ಸಂಬಂಧಿಸಿದ ಎನ್ ಡಿ ಪಿ ಎಸ್ ಕಾಯ್ದೆ ಬಗ್ಗೆ ವಿವರವಾಗಿ ತಿಳಿಸಿದರು.

ಅನೈತಿಕ ಹಾಗೂ ಸಮಾಜಘಾತುಕ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾನೂನಿನ ಚೌಕಟ್ಟಿನೊಳಗೆ ಸಂವಿಧಾನವು ಒದಗಿಸಿರುವ ಸ್ವಾತಂತ್ರ್ಯವನ್ನು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ಹಳಿಯಾಳ ಸಿ ಪಿ ಐ ಶ್ರೀ ಜಯಪಾಲ್ ಪಾಟೀಲ್ ಹಳಿಯಾಳ ಠಾಣೆಯ ಅಪರಾಧ ವಿಭಾಗದ ಪಿ ಎಸ್ ಐ ಅಮ್ಮಿನ ಅತ್ತಾರ್ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಉತ್ತಮ ಸಮಾಜ ನಿರ್ಮಾಣದಲ್ಲಿ ನಾಗರೀಕ ಅಭಿಯಂತರ ಪಾತ್ರ ಮಹತ್ವವಾಗಿದ್ದು ಯುವ ಇಂಜಿನಿಯರ್ ಗಳು ತಮ್ಮ ಜವಾಬ್ದಾರಿಯನ್ನು ಅರಿತು ಸಮಾಜ ಸೇವೆಗೆ ಮುಂದಾಗಬೇಕೆಂದು ಹೇಳಿದರು. ಡೀನ್ ಪ್ರೊ. ಸುಧೀರ್ ಕುಲಕರ್ಣಿ ಸ್ವಾಗತಿಸಿದರು. ಡಾ ಎಂ ಎಸ್ ಸನ್ನಾಯ್ಕರ್ ಅತಿಥಿ ಪರಿಚಯ ಮಾಡಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಸಮೀರ್ ಗಲಗಲಿ ವಂದಿಸಿದರು. ಆವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ. ಮಹೇಂದ್ರ ದೀಕ್ಷಿತ್, ಎನ್ ಎಸ್ ಎಸ್ ಸಂಚಾಲಕ ಪ್ರೊ. ಸಂತೋಷ ಸವಣೂರು ಕಾರ್ಯಕ್ರಮ ಸಂಯೋಜಿಸಿದ್ದರು.

ವಿಜ್ಞಾನ ವಿಭಾಗ, ಎನ್ ಎಸ್ ಎಸ್ ಘಟಕ ಮತ್ತು ಆವಿಷ್ಕಾರ ಪರಿಷತ್ತು ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 300ಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸೈಬರ್ ಅಪರಾಧ ತಡೆಯುವಲ್ಲಿ ವಿದ್ಯಾರ್ಥಿಗಳು ಕಾರ್ಯಪ್ರವೃತ್ತರಾಗಬೇಕು: ಎಸ್ಪಿ ನಾರಾಯಣ ಎಂ.



ಕರಾವಳಿ ಮುಂಜಾವು ವರದಿ

**ಹಳಿಯಾಳ:** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ಮಾಹಿತಿಗಳನ್ನು ಹಂಚಿಕೊಳ್ಳುವ ಮುನ್ನ ಎಚ್ಚರಿಕೆ ವಹಿಸಬೇಕು. ಯುವ ಅಭಿಯಂತರರು, ಹ್ಯಾಕರ್ಸ್‌ಗಳು ಮಾಹಿತಿಗಳನ್ನು ದುರುಪಯೋಗಪಡಿಸಿಕೊಳ್ಳದಂತಹ ಸಾಫ್ಟವೇರ್‌ಗಳನ್ನು ತಯಾರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಎಂ. ಹೇಳಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಸೈಬರ್ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಇಂದಿನ ಯುವ ಪೀಳಿಗೆ ಸಾಮಾಜಕ ಜಾಲತಾಣದಲ್ಲಿ ಅತಿಯಾಗಿ ತಮ್ಮನ್ನು ತೊಡಗಿಸಿಕೊಳ್ಳುತ್ತಿರುವುದರಿಂದ ಸೈಬರ್ ಅಪರಾಧಗಳು ಅಧಿಕವಾಗುತ್ತಿದೆ. ತೀರಾ ಖಾಸಗಿ ಮಾಹಿತಿಗಳನ್ನು ಜಾಲತಾಣಗಳಲ್ಲಿ ಹಂಚಿಕೊಳ್ಳುವುದರಿಂದ ಹ್ಯಾಕರ್ಸ್‌ಗಳು ಈ ಮಾಹಿತಿಯ ಲಾಭ ಪಡೆದು ಆರ್ಥಿಕ ಹಾಗು ಸಾಮಾಜಿಕವಾಗಿ ಹಾನಿ ಮಾಡುತ್ತಿದ್ದಾರೆ.

ಅಗತ್ಯತೆಕ್ಕಿಂತ ಅಧಿಕವಾಗಿ ಸಾಮಾಜಿಕ ಜಾಲತಾಣಗಳಲ್ಲಿ ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಆನ್‌ಲೈನ್ ಗೇಮ್ಸ್ ಹಾಗು ನಗದು ವ್ಯವಹಾರ ಮಾಡುವ ಮುನ್ನ ತಂತ್ರಾಂಶದ ಸತ್ಯಾಸತ್ಯತೆಯನ್ನು ತಿಳಿದುಕೊಳ್ಳುವುದು ಉತ್ತಮ ಎಂದು ತಿಳಿಸಿದರು.

ಗೌರವ ಅತಿಥಿಗಳಾಗಿ ಆಗಮಿಸಿದ್ದ ದಾಂಡೇಲಿ ಉಪ ಪೊಲೀಸ್ ಅಧೀಕ್ಷಕ ಶಿವಾನಂದ ಮದರಖಂಡಿ, ಹಳಿಯಾಳ ಠಾಣೆಯ ಪಿಎಸ್‌ಐ ವಿನೋದ್ ರೆಡ್ಡಿ ಮಾದಕ ವಸ್ತುಗಳಿಗೆ ಸಂಬಂಧಿಸಿದ ಎನ್‌ಡಿಪಿಎಸ್ ಕಾಯ್ದೆ ಬಗ್ಗೆ ವಿವರವಾಗಿ ತಿಳಿಸಿದರು.

ಅನೈತಿಕ ಹಾಗು ಸಮಾಜಘಾತುಕ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾನೂನಿನ ಚೌಕಟ್ಟಿನೊಳಗೆ ಸಂವಿಧಾನವು ಒದಗಿಸಿರುವ



ಸ್ವಾತಂತ್ರ್ಯವನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಹೇಳಿದರು. ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಹಳಿಯಾಳ ಸಿಪಿಐ ಜಯಪಾಲ್ ಪಾಟೀಲ್, ಹಳಿಯಾಳ ಠಾಣೆಯ ಅಪರಾಧ ವಿಭಾಗದ ಪಿಎಸ್‌ಐ ಅಮ್ಮಿನ ಅತ್ತಾರ್ ಉಪಸ್ಥಿತರಿದ್ದರು.

ಡೀನ್ ಪ್ರೊ. ಸುಧೀರ್ ಕುಲಕರ್ಣಿ ಸ್ವಾಗತಿಸಿದರು. ಡಾ. ಎಂ.ಎಸ್. ಸನ್ನಾಯ್ಕರ್ ಅತಿಥಿ ಪರಿಚಯ ಮಾಡಿದರು. ವಿಜ್ಞಾನ ವಿಭಾಗದ ಮುಖ್ಯಸ್ಥ ಡಾ. ಸಮೀರ್ ಗಲಗಲಿ ವಂದಿಸಿದರು. ಆವಿಷ್ಕಾರ ಪರಿಷತ್ತಿನ ಅಧ್ಯಕ್ಷ ಡಾ. ಮಹೇಂದ್ರ ದೀಕ್ಷಿತ್, ಎನ್‌ಎಸ್‌ಎಸ್ ಸಂಚಾಲಕ ಪ್ರೊ. ಸಂತೋಷ ಸವಣೂರು ಕಾರ್ಯಕ್ರಮ ಸಂಯೋಜಿಸಿದ್ದರು.

ವಿಜ್ಞಾನ ವಿಭಾಗ, ಎನ್‌ಎಸ್‌ಎಸ್ ಘಟಕ ಮತ್ತು ಆವಿಷ್ಕಾರ ಪರಿಷತ್ತು ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ 300ಕ್ಕೂ ಅಧಿಕ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಪ್ರಕರಣ ಹಿಂಪಡೆಯಲು ರೈತರ ಮನವಿ



**ಹಳಿಯಾಳ:** ಕಳೆದ ವರ್ಷ ಪ್ರತಿಭಟನೆ ನಡೆಸುತ್ತಿರುವ ಸಂದರ್ಭದಲ್ಲಿ ಪೊಲೀಸ್ ಇಲಾಖೆ ದಾಖಲಿಸಿರುವ ಪ್ರಕರಣಗಳನ್ನು ಹಿಂಪಡೆಯುವಂತೆ ಆಗ್ರಹಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ರಾಜ್ಯ ಕಬ್ಬು ಬೆಳೆಗಾರರ ಸಂಘವು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಎಮ್. ಅವರಿಗೆ ಹಳಿಯಾಳ ಪೊಲೀಸ್ ಠಾಣೆಯಲ್ಲಿ ಮನವಿ ಸಲ್ಲಿಸಿದರು

ಈಐಡಿ ಪರಿಸಕ್ಕರೆ ಕಾರ್ಖಾನೆಯಿಂದ ರೈತರಿಗೆ ಆಗುತ್ತಿರುವ ಅನ್ಯಾಯ ಹಾಗು ಕಳೆದ ವರ್ಷ ಜಿಲ್ಲಾಧಿಕಾರಿಯವರ ಸಮ್ಮುಖದಲ್ಲಿ ಆದ ಒಪ್ಪಂದಗಳನ್ನು ಜಾರಿಗೆ ತರಲು ಶೀಘ್ರದಲ್ಲಿ ಹಳಿಯಾಳ ಪಟ್ಟಣದಲ್ಲಿ ಡಿಸಿ ಹಾಗು ಎಸ್‌ಪಿ ಅವರ ನೇತೃತ್ವದಲ್ಲಿ ಸಭೆ ನಡೆಸಲು ಹಾಗು ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಚರ್ಚಿಸಿ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಅಧ್ಯಕ್ಷ ಕುಮಾರ್ ಬೊಬಾಟಿ ಸಂಘದ ತಾಲೂಕಾ ಅಧ್ಯಕ್ಷ ಶಂಕರ್ ಕಾಜಗಾರ್ ಸಂಘದ ತಾಲೂಕಾ ಪ್ರಧಾನ ಕಾರ್ಯದರ್ಶಿ ಅಶೋಕ್ ಮೇಟಿ, ಹಿರಿಯ ರೈತ ಮುಖಂಡ ನಾಗೇಂದ್ರ ಜಿಯೋಜಿ, ಮುಖಂಡರಾದ ಪ್ರಕಾಶ್ ಪಾಕರಿ, ಬಸವರಾಜ್ ಬೆಂಡಿಗೇರಿಮಠ ಹಾಜರಿದ್ದರು.



**SP Karwar** @spkarwar · 1h

ಇಂದು ಉತ್ತರ ಕನ್ನಡ ಜಿಲ್ಲೆಯ ವಿಶ್ವನಾಥರಾವ್ ದೇಶಪಾಂಡೆ ಇನ್ಸ್ಟಿಟ್ಯೂಟ್ ಆಪ್ ಟೆಕ್ನಾಲಜಿ ಹಳಿಯಾಳ ಕಾಲೇಜಿಗೆ ಭೇಟಿ ನೀಡಿ, ವಿದ್ಯಾರ್ಥಿಗಳಿಗೆ ಮಾದಕ ವಸ್ತು ಸೇವನೆ ಹಾಗೂ ಸೈಬರ್ ಅಪರಾಧಗಳಿಂದಾಗುವ ದುಷ್ಪರಿಣಾಮ ಹಾಗೂ ಸೈಬರ್ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸಲಾಯಿತು.
@CMofKarnataka @DrGParameshwara
@DgpKarnataka
@Rangepol_WR Show more








